# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1639(1930)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಸಹಕಾರ ಸಚಿವರು

ವಿಷಯ : ಅಲ್ಪಾವಧಿ ಸಾಲ ನೀಡುತ್ತಿರುವ ಸಂಸ್ಥೆಗಳಲ್ಲಿ ನಡೆಯುತ್ತಿರುವ ಅವ್ಯವಹಾರಗಳ ಬಗ್ಗೆ

(ಅ) ಆಗಿಂದ್ದಾಗ್ಗೆ ಯೋಜನೆ/ಘಟಕ ವೆಚ್ಚಗಳನ್ನು ಪರಿಷ್ಕರಿಸಿ, ಅವಶ್ಯವಿರುವಷ್ಟು ಅಗತ್ಯಕ್ಕೆ ತಕ್ಕಂತೆ ಸಹಕಾರ ಸಂಘಗಳ ಮೂಲಕ ಸಾಲ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೇ;

(ಆ) ಸಾಲ ಪಡೆದಿರುವ ಫಲಾನುಭವಿಗಳಿಂದ ಸಾಲದ ಹೊರೆ ಬಾಕಿ ಇರುವ ಬಗ್ಗೆ ದೃಢೀಕರಣವನ್ನು ಪಡೆಯಲು ಇರುವ ಮಾನದಂಡಗಳೇನು; (ವಿವರ ಒದಗಿಸುವುದು)

(ಇ) ಶೂನ್ಯ ಬಡ್ಡಿ ದರದಲ್ಲಿ ನೀಡುತ್ತಿರುವ ಬೆಳೆ ಸಾಲದ ಮಿತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ದೀರ್ಘಾವಧಿ ಸಾಲಗಳ ಸಂಬಂಧ ರಿಯಾಯಿತಿ ಬಡ್ಡಿ ದರದಲ್ಲಿ ನೀಡುತ್ತಿರುವ ಸಾಲದ ಮಿತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಅಲ್ಪಾವಧಿ ಸಾಲ ನೀಡುತ್ತಿರುವ ಸಂಸ್ಥೆಗಳಲ್ಲಿ ಬಹಳಷ್ಟು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರಿಸುವುದು)